ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE 22/5/2020

# ನಿಯಮ ಗಾಳಿಗೆ ತೂರಿ ಶಾಸಕ ಎ.ಮಂಜುನಾಥ್ ಹುಟ್ಟುಹಬ್ಬ



ರಾಮನಗರ: ಕೊರೋನಾ ಲಾಕ್‌ಡೌನ್ ನಡುವೆಯೂ ಮಾಗಡಿ ಶಾಸಕ ಎ.ಮಂಜುನಾಥ್ ಸರ್ಕಾರಿ ನಿಯಮಗಳನ್ನು ಗಾಳಿಗೆ ತೂರಿ ಗುರುವಾರ ತಮ್ಮ ಹುಟ್ಟುಹಬ್ಬವನ್ನು ಅದ್ದೂರಿಯಾಗಿ ಆಚರಿಸಿಕೊಳ್ಳುವ ಮೂಲಕ ಟೀಕೆಗೆ ಗುರಿಯಾಗಿದ್ದಾರೆ.

ಬಿಡದಿಯ ತಮ್ಮ ಮನೆಯ ಎದುರಿನ ಖಾಲಿ ನಿವೇಶನದಲ್ಲಿ ಶಾಸಕರ ಜನ್ಮದಿನ ಆಚರಣೆಗಾಗಿಯೇ ಶಾಮಿಯಾನ ಹಾಕಲಾಗಿತ್ತು. ಮಂಜು ದಂಪತಿಗೆ ವೇದಿಕೆ ಮೇಲೆ ಜೆಡಿಎಸ್ ಮುಖಂಡರು, ಕಾರ್ಯಕರ್ತರು ಹಾಗೂ ಅಭಿಮಾನಿಗಳು ಶುಭಾಶಯ ಕೋರುತ್ತಿದ್ದರು. ಆಗಮಿಸುವವರಿಗೆಲ್ಲ ಆಸನ ವ್ಯವಸ್ಥೆ ಕೂಡ ಮಾಡಲಾಗಿತ್ತು. ಈ ವೇಳೆ ಮಂಜುನಾಥ್‌ಗೆ ಶುಭಕೋರಲು ಬಂದ ಜೆಡಿಎಸ್ ಮುಖಂಡರು, ಕಾರ್ಯಕರ್ತರು ಮಾಸ್ಕ್ ಧರಿಸದೇ, ಸಾಮಾಜಿಕ ಅಂತರ ಕಾಪಾಡಿಕೊಳ್ಳುವಲ್ಲಿ ವಿಫಲರಾಗಿದ್ದಾರೆ. ಯಾವುದೇ ಸಭೆ ಸಮಾರಂಭಗಳನ್ನು ಮಾಡಬಾರದೆಂಬ ನಿಯಮಗಳಿವೆ. ಆದರೆ, ನಿಯಮಗಳನ್ನು ಗಾಳಿಗೆ ತೂರಿ ಹುಟ್ಟುಹಬ್ಬ ಆಚರಿಸಿಕೊಂಡಿರುವುದು ಸಾಕಷ್ಟು ಟೀಕೆಗೂ ಗುರಿಯಾಗಿದೆ.